ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	(473)344
ಸದಸ್ಯರ ಹೆಸರು	:	ಶ್ರೀ ಶ್ರೀನಿವಾಸ ಎಂ.(ಮಂಡ್ಯ)
ಉತ್ತರಿಸುವ ಸಚಿವರು	:	(ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಅ. ಮಂಡ್ಯ ನಗರದ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನ ಕಟ್ಟಡ ಶಿಥಿಲಗೊಂಡಿದ್ದು, ಶೈಕ್ಷಣಿಕ ಚಟುವಟಿಕೆಗಳಿಗೆ ತೀರಾ ಅನಾನುಕೂಲವಾಗಿರುವುದನ್ನು ಸರ್ಕಾರ ಗಮನಿಸಿದೆಯೇ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ವಿಳಂಬ ಮಾಡುತ್ತಿರಲು ಕಾರಣಗಳೇನು;

ಮಂಡ್ಯನಗರದ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನ ಕಟ್ಟಡ ಶಿಥಿಲಗೊಂಡಿದ್ದು, ಶೈಕ್ಷಣಿಕ ಚಟುವಟಿಕೆಗಳ ತೀರಾ ಅನಾನುಕೂಲವಾಗಿರುವುದನ್ನು ಸರ್ಕಾರ ಗಮನಿಸಿದೆ. ಆದ್ದರಿಂದ ಹೆಚ್ಚುವರಿ ಕೊಠಡಿ ಮತ್ತು ಗ್ರಂಥಾಲಯ ನಿರ್ಮಾಣಕ್ಕಾಗಿ ಲೆಕ್ಕಶೀರ್ಷಿಕೆ 4202ರಡಿ 50.00ಲಕ್ಷರೂ.ಗಳನ್ನು ಬಿಡುಗಡೆ ಮಾಡಿ ಲೋಕೋಪಯೋಗಿ ಇಲಾಖೆಯ ವತಿಯಿಂದ ಕಾಮಗಾರಿಗಳನ್ನು ಪ್ರಾರಂಭಿಸಿದ್ದು, 2007–08ನೇ ಸಾಲಿಗೆ 15.00 ಲಕ್ಷರೂ.ಗಳನ್ನು ಖರ್ಚು ಮಾಡಲಾಗಿದೆ. 2008–09ನೇ ಸಾಲಿಗೆ ಸದರಿ ಲೆಕ್ಕಶೀರ್ಷಿಕೆಯಡಿ ಒದಗಿಸಲಾದ 2000.00ಲಕ್ಷರೂ.ಗಳಲ್ಲಿ ಮೇಲ್ಕಂಡ ಕಾಮಗಾರಿಯ ಪ್ರಗತಿಯನ್ನು ಆಧರಿಸಿ ಕಾಮಗಾರಿಗೆ ಅನುದಾನವನ್ನು ವಿಳಂಬವಿಲ್ಲದಂತೆ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು;

ಆ. ವಿದ್ಯಾರ್ಥಿಗಳ ಸಂಖ್ಯೆಯನ್ನು ಅನುಸರಿಸಿ ಕಟ್ಟಡದ ಸೌಲಭ್ಯವನ್ನು ಒದಗಿಸಿಕೊಟ್ಟು ಬಡ ಮತ್ತು ಮಧ್ಯಮ ವರ್ಗದ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡುವ ಸರ್ಕಾರದ ಕ್ರಮಗಳೇನು;

ಅನುದಾನದ ಲಭ್ಯತೆಯನ್ನು ಆಧರಿಸಿ ಆದ್ಯತೆಯ ಮೇರೆಗೆ ಅನುದಾನವನ್ನು ಬಿಡುಗಡೆ ಮಾಡಿ ಹಂತ ಹಂತವಾಗಿ ಕಟ್ಟಡ ಸೌಲಭ್ಯವನ್ನು ಒದಗಿಸಿಕೊಡಲು ಕ್ರಮ ಕೈಗೊಳ್ಳಲಾಗುವುದು.

ಇ. ಈ ಕೊಠಡಿಗಳ ದುರಸ್ತಿ ಹಾಗೂ ನೂತನ ಕೊಠಡಿಗಳ ನಿರ್ಮಾಣದ ಕಾರ್ಯವನ್ನು ಈ ಸಾಲಿನಲ್ಲೇ ತೆಗೆದುಕೊಳ್ಳಲು ಸರ್ಕಾರದ ಕ್ರಮವೇನು?

2008–09ನೇ ಸಾಲಿಗೆ ಒದಗಿಸಲಾಗಿರುವ ಅನುದಾನದಲ್ಲಿ ಸದರಿ ಕಾಲೇಜಿನ ಕೊಠಡಿಗಳ ದುರಸ್ತಿಯನ್ನು ಆದ್ಯತೆ ಮೇರೆಗೆ ಕೈಗೊಳ್ಳಲಾಗುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	(326)345
ಸದಸ್ಯರ ಹೆಸರು	:	ಶ್ರೀ ಸುರೇಶ್ ಬಾಬು ಪಿ.ಬಿ
ಉತ್ತರಿಸುವ ಸಚಿವರು	:	(ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ)